**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ**
**ದಂಡಾಧಿಕಾರಿಗಳ ನ್ಯಾಯಾಲಯ, ದಾಂಡೇಲಿ**
**ಕ್ರಿಮೀನಲ್ ಮೊಕದ್ದಮೆ ನಂ. 590/2024.**

ಚಾಸಾ-03

ಪ್ರಾಸಾ-05

(ಸಾಕ್ಷಿಗೆ ಮರಾಠಿ ಭಾಷೆ ಮಾತ್ರ ಗೊತ್ತಿರುವುದರಿಂದ ಕನ್ನಡ ಭಾಷೆಯಲ್ಲಿ ಕೇಳುವ ಪ್ರಶ್ನೆಗಳನ್ನು ಸಾಕ್ಷಿಗೆ ಮರಾಠಿ ಭಾಷೆಗೆ ಭಾಷಾಂತರಿಸಿ ಸಾಕ್ಷಿ ಮರಾಠಿ ಭಾಷೆಯಲ್ಲಿ ಹೇಳುವ ಉತ್ತರವನ್ನು ಕನ್ನಡ ಭಾಷೆಗೆ ಭಾಷಾಂತರಿಸಲು ಶ್ರೀ ವಿ ಎಸ್ ಜೆ ವಕೀಲರನ್ನು ಭಾಷಾಂತಕಾರರನ್ನಾಗಿ ನೇಮಿಸಲಾಯಿತು ಮತ್ತು ಅವರಿಗೆ ಸತ್ಯ ಪ್ರತಿಜ್ಞೆ ಮೇಲೆ ಸಾಕ್ಷಿಗೆ ಪ್ರಮಾಣ ವಚನವನ್ನು ಭೋಧಿಸಲಾಯಿತು)

**ದಿನಾಂಕಃ 22-06-2026 ರಂದು ಸತ್ಯ ಪ್ರತಿಜ್ಞೆ ಮೇಲೆ ಸಾಕ್ಷಿಗೆ ಪ್ರಮಾಣ ವಚನವನ್ನು ಭೋಧಿಸಲಾಯಿತು .**

ಸಾಕ್ಷಿಯ ಹೆಸರು ಃ ಪ್ರಶಾಂತ ತಂಃ ಸುರೇಶ ಶಿರೋಡ್ಕರ

**ಪಾಟೀ ಸವಾಲುಃ ಆರೋಪಿ ಪರ ಶ್ರೀ. ಎಂ ಎಸ್ ಪಿ ವಕೀಲರಿಂದ**

9. ಅಪಘಾತದಲ್ಲಿ ಮರಣ ಹೊಂದಿದ ವ್ಯಕ್ತಿ ನಮ್ಮ ಊರಿನವನು ಎಂದರೆ ಸರಿ. ನಾವಿಬ್ಬರೂ ಒಂದೇ ಕೋಮಿಗೆ ಸೇರಿದವರು ಎಂದರೆ ಸರಿ. ನಮ್ಮ ಸಮಕ್ಷಮದಲ್ಲಿ ಚಾಸಾ 7 ರವರು ಅಪಘಾತದ ಸ್ಥಳ ತೋರಿಸಿರುತ್ತಾರೆ, ಅಲ್ಲಿ ಅಪಘಾತಕ್ಕಿಡಾದ ಎರಡು ವಾಹನಗಳು ಬಿದ್ದಿದ್ದವು. ಅಲ್ಲಿ ಪೋಲಿಸರು ಪಂಚನಾಮೆ ಮಾಡಿರುತ್ತಾರೆ. ಪಂಚನಾಮೆ ಮಾಡುವ ಸಮಯದಲ್ಲಿ ನಾನು ಚಾಸಾ 2, ಚಾಸಾ 7 ಮತ್ತು ಇನ್ನೂ 4-5 ಜನ ಇದ್ದರು. ಪೋಲಿಸರ ನಮ್ಮ ಹೇಳಿಕೆಯಂತೆ ಲ್ಯಾಪಟಾಪನಲ್ಲಿ ಮಹಜರನ್ನು ಟೈಪ ಮಾಡಿರುತ್ತಾರೆ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ. ಅಪಘಾತದಲ್ಲಿ ಮರಣ ಹೊಂದಿದ ವ್ಯಕ್ತಿ ನನ್ನ ಊರಿನವನಾದ ಕಾರಣ, ಅಪಘಾತ ಅವನ ತಪ್ಪಿನಿಂದ ಆಗಿದೇ ಎಂದು ಗೊತ್ತಿದ್ದರೂ ಸಹಿತ, ಅವನ ಕುಟುಂಬಕ್ಕೆ ಸಹಾಯ ಮಾಡಬೇಕು ಎನ್ನುವ ಉದ್ದೇಶದಿಂದ ಸುಳ್ಳು ಸಾಕ್ಷಿಯನ್ನು ನುಡಿಯುತ್ತಿದ್ದೆನೆ ಎಂದರೆ

ಸರಿಯಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ. ಸರಿ ಇದೆ**

**ಸಹಿ ಇದೆ**

**(ತೇಜಸ್ವಿನಿ ಸೊಗಲದ)**

**ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ. ದಂಡಾಧಿಕಾರಿಗಳು,ದಾಂಡೇಲಿ.**